ಕೆಂಗೇರಿ ಹೋಬಳಿ ಡೆಮ್ಮಿಗೆಪುರ ಸರ್ವೆ ನಂ. 89ರಲ್ಲಿನ ಜಮೀನು ಒತ್ತುವರಿ

177(659) ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿ ಡೆಮ್ಮಿಗೆಪುರ ಸರ್ವೆ ನಂ. 89 ಮತ್ತು ಗಾಣಕಲ್ಲು ಸರ್ವೆ ನಂ. 14ರಲ್ಲಿ ಸರ್ಕಾರಕ್ಕೆ ಸೇರಿದ ಎಷ್ಟು ಎಕರೆ ಜಮೀನು ಇವೆ?

ಆ) ಈ ಜಮೀನನ್ನು ಒತ್ತುವರಿ ಮಾಡಿಕೊಂಡು ಕಟ್ಟಡ, ಕಾಂಪೌಂಡ್ ಮತ್ತು ನೀರಾವರಿಗೆ ಅಕ್ರಮವಾಗಿ ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಇದ್ದಲ್ಲಿ ಒತ್ತುವರಿಯಾಗಿರುವ ಜಮೀನನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) 1) ಹೆಮ್ಮಿಗೆಪುರ ಗ್ರಾಮದ ಸ.ನಂ. 89ರಲ್ಲಿ ವಹಿಸಿ ದಾಖಲೆಯಂತೆ 50.07 ಎಕರೆ ಖಿರಾಬು ಜಮೀನಾಗಿರುತ್ತದೆ.

2) ಗಾಣಕಲ್ಲು ಗ್ರಾಮದ ಸ.ನಂ. 14ರಲ್ಲಿ ಪಹಣಿ ದಾಖಲೆಯಂತೆ 45.30 ಎಕರೆ ಮುಫತ್ ಕಾವಲು ಜಮೀನಾಗಿರುತ್ತದೆ.

ಆ) ಹೌದು.

ಇ) ಹೆಮ್ಮಿಗೆಪುರ ಗ್ರಾಮದ ಸ.ನಂ. 89ರಲ್ಲಿನ ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಬನಶಂಕರಿ 6ನೇ ಹಂತ ಬಡಾವಣೆಗಾಗಿ ಭೂಸ್ವಾಧೀನ ಮಾಡಿಕೊಂಡು ಜಮೀನಿನಲ್ಲಿ ರಸ್ತೆ ವಗೈರೆ ನಿರ್ಮಿಸಿರುವುದರಿಂದ ಒತ್ತುವರಿಯಿಂದ ತೆರವುಗೊಳಿಸುವ ಪ್ರಮೇಯ ಉದ್ಭವಿಸಿರುವುದಿಲ್ಲ.

2) ಗಾಣಕಲ್ಲು ಗ್ರಾಮದ ಸ.ನಂ. 14ರ ಜಮೀನಿನಲ್ಲಿ ಮಂಜೂರಾತಿಯಾಗಿ ಉಳಿದಿರುವ ಜಮೀನಿನಲ್ಲಿನ 15-00 ಎಕರೆ ವಿಸ್ತೀರ್ಣದ ಪ್ರದೇಶದಲ್ಲಿ ಅಕ್ರಮವಾಗಿ ನಿರ್ಮಿಸಲಾಗಿರುವ ಗುಡಿಸಲುಗಳನ್ನು ಸಕ್ರಮಗೊಳಿಸಲು ಕೋರಿ 1964ರ ಕರ್ನಾಟಕ ಭೂ ಕಂದಾಯ ಅಧಿನಿಯಮದ ಕಲಂ 94(ಸಿ) ಅಡಿಯಲ್ಲಿ ರಚಿಸಲಾಗಿರುವ ನಿಯಮಗಳಡಿಯಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಈ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಸಕ್ರಮಗೊಳಿಸಲು ಅವಕಾಶವಿಲ್ಲದ ಪ್ರಕರಣಗಳಲ್ಲಿ ತೆರವುಗೊಳಿಸಲು ಕ್ರಮ ಜರುಗಿಸಲಾಗುವುದು.

ಗ್ರಾಮಾಂತರ ಪ್ರದೇಶದಲ್ಲಿ ಮಾಹಿತಿ ತಂತ್ರಜ್ಞಾನ ಬಳಕೆ

178(224) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಹಿತಿ ತಂತ್ರಜ್ಞಾನದ ಬಳಕೆ ರಾಜ್ಯದ ಗ್ರಾಮೀಣ ಜನತೆಗೆ ತಲುಪಲು ಸರ್ಕಾರವು ವಿಶೇಷ ಕಾರ್ಯಕ್ರಮವನ್ನೇನಾದರೂ ರೂಪಿಸಿದೆಯೇ?

ಆ) ರೂಪಿಸಿದ್ದಲ್ಲಿ, ಅದರ ಬಗೆಗಿನ ವಿವರಗಳೇನು?

ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು):

ಆ) ಹೌದು.

ಅ) 1) ಭೂಮಿ-ರೈತರಿಗೆ ಅತಿ ಮುಖ್ಯವಾದ ಒಡೆತನ ದಾಖಲೆ ಪತ್ರದ (ಆರ್‌ಟಿಸಿ) ವನ್ನು ವಿಳಂಬವಿಲ್ಲದೆ ನೀಡುವ ಯೋಜನೆ ಇದಾಗಿದ್ದು, ಈಗಾಗಲೇ ಸಂಪೂರ್ಣವಾಗಿ ಕಾರ್ಯಗತಗೊಳಿಸಲಾಗಿರುತ್ತದೆ.

2. ರೈತ ಮಿತ್ರ ಕೇಂದ್ರ - ಈ ಯೋಜನೆಯಲ್ಲಿ 745 ಹೋಬಳಿಗಳಲ್ಲಿರುವ ರೈತ ಸಂಪರ್ಕ ಕೇಂದ್ರಗಳನ್ನು ಗಣಕೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಈಗಾಗಲೇ 117 ರೈತ ಸಂಪರ್ಕ ಕೇಂದ್ರಗಳು ಗಣಕೀಕೃತವಾಗಿದೆ. ಈ ಕೇಂದ್ರಗಳಲ್ಲಿ ರೈತರಿಗೆ ಬೇಕಾದ ಬೆಳೆಗಳ ಮಾಹಿತಿ, ಬೆಳೆಗಳ ವಿಧಾನಗಳು ಹಾಗೂ ಕೃಷಿ ಉತ್ಪನ್ನಗಳ ಮಾರುಕಟ್ಟೆ ಬೆಲೆಗಳ ವಿವರಗಳನ್ನು ರೈತರಿಗೆ ತ್ವರಿತವಾಗಿ ಸಿಗುವಂತೆ ಮಾಡಲಾಗಿದೆ. ಇತ್ಯಾದಿ.

3. ಯುವ.ಕಾಂ-ಮಾಹಿತಿ ತಂತ್ರಜ್ಞಾನದಲ್ಲಿ ಗ್ರಾಮೀಣ ವಿದ್ಯಾವಂತ ನಿರುದ್ಯೋಗಿ ಯುವಕ-ಯುವತಿಯರಿಗೆ ತರಬೇತಿ ನೀಡುವ ಉದ್ದೇಶದಿಂದ ಯುವ.ಕಾಂ. ಯೋಜನೆಯನ್ನು ಜಾರಿಗೆ ತಂದಿದ್ದು, ರಾಜ್ಯದ ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲಿ ತಲಾ ಒಂದರಂತೆ ಯುವ.ಕಾಂ ಕೇಂದ್ರಗಳನ್ನು ತರೆಯಲಾಗುತ್ತಿದೆ.

ಮಂಡ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳು

179(662) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯದಲ್ಲಿನ ಹಳೆ ಎಂ.ಸಿ. ರಸ್ತೆಯನ್ನು ಕೆ.ಆರ್.ಡಿ.ಸಿ. ವತಿಯಿಂದ ಅಭಿವೃದ್ಧಿ ಗೊಳಿಸುವ ಕಾಮಗಾರಿಗೆ ಮಾನ್ಯ ಮುಖ್ಯಮಂತ್ರಿಗಳು ಶಂಕು ಸ್ಥಾಪನೆ ಮಾಡಿರುವುದನ್ನು ಸರಕಾರ ಅರಿತಿದೆಯೇ?

ಆ) ಹಾಗಿದ್ದಲ್ಲಿ, ಈ ಕಾಮಗಾರಿಗೆ ಯಾವುದೇ ಪೂರ್ವಭಾವಿ ಸಿದ್ಧತೆ ಇಲ್ಲದೇ ಶಂಕು ಸ್ಥಾಪನೆ ಮಾಡಲಾಗಿದೆಯೇ?

ಇ) ಈ ಕಾಮಗಾರಿ ಇನ್ನೂ ಪ್ರಾರಂಭವಾಗದಿರಲು ಕಾರಣವೇನು?

ಈ) ಈ ಕಾಮಗಾರಿಯ ವಿವರಗಳೇನು?

ಉ) ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಹೌದು.